ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH
ಪತ್ರಿಕಾ ತುಣುಕುಗಳು
PAPER CLIPPINGS
ಇಲಾಖೆ / ವಿಷಯ : DEPARTMENT / SUBJECT:
ಪತ್ರಿಕೆಯ ಹೆಸರು : NAME OF THE NEWS PAPER: ವಿಜಯವಾಣಿ
ದಿನಾಂಕ : DATE:

# ಈವರೆಗೆ 61 ಲಕ್ಷ ಡೋಸ್ ಲಸಿಕೆ ನೀಡಿಕೆ

## ಆರೋಗ್ಯ ಸಚಿವ ಡಾ.ಕೆ. ಸುಧಾಕರ್ ಹೇಳಿಕೆ | ಕರೊನಾ ಲಸಿಕೆ ಉತ್ಸವಕ್ಕೆ ಚಾಲನೆ

ವಿಜಯವಾಣಿ ಸುದ್ದಿಜಾಲ ಬೆಂಗಳೂರು

ರಾಜ್ಯದಲ್ಲಿ 61 ಲಕ್ಷ ಕೋವಿಡ್ ಲಸಿಕೆ ನೀಡಲಾಗಿದ್ದು, ಮಹಿಳೆಯರೇ ಹೆಚ್ಚಿನ ಸಂಖ್ಯೆಯಲ್ಲಿ ಪಡೆದಿದ್ದಾರೆ ಎಂದು ಆರೋಗ್ಯ ಮತ್ತು ವೈದ್ಯಕೀಯ ಶಿಕ್ಷಣ ಸಚಿವ ಡಾ.ಕೆ. ಸುಧಾಕರ್ ಹೇಳಿದ್ದಾರೆ.

ಅಟಲ್ ಬಿಹಾರಿ ವಾಜಪೇಯಿ ಮೆಡಿಕಲ್ ಕಾಲೇಜು (ಬೌರಿಂಗ್ ಆಸ್ಪತ್ರೆ)ಯಲ್ಲಿ ಭಾನುವಾರ ಕರೊನಾ ಲಸಿಕೆ ಉತ್ಸವಕ್ಕೆ ಚಾಲನೆ ನೀಡಿ ಮಾತನಾಡಿದರು. ಶೇ.53 ಪ್ರಮಾಣದ ಲಸಿಕೆಯನ್ನು ಮಹಿಳೆಯರು ಪಡೆದು ಮಾದರಿಯಾಗಿದ್ದಾರೆ. ರಾಜ್ಯಕ್ಕೆ 72 ಲಕ್ಷಕ್ಕೂ ಅಧಿಕ ಲಸಿಕೆ ಬಂದಿದೆ. ಲಸಿಕೆ ವಿಚಾರದಲ್ಲಿ ರಾಜಕೀಯ, ಧರ್ಮ, ಭಾಷೆ ಬೆರೆಸುವ ಕೆಲಸ ಮಾಡಬಾರದು.

» ಶೇ.53 ಮಹಿಳೆಯರು

ಸಾಂಕೇತಿಕವಾಗಿ ಎಲ್ಲ ಧರ್ಮಗಳ ಮಹಿಳೆಯರಿಗೆ ಲಸಿಕೆ ನೀಡುವ ಮೂಲಕ ವಿಶೇಷ ಉತ್ಸವಕ್ಕೆ ಚಾಲನೆ ನೀಡಲಾಗಿದೆ. ಈ ಅಭಿಯಾನದಲ್ಲಿ ಮಹಿಳೆಯರೇ ನಿಜವಾದ ಮಾರ್ಗದರ್ಶಕರು ಎಂದರು.

ಹಲವು ಸಾಂಕ್ರಾಮಿಕ ರೋಗಗಳಿಗೆ ಹತ್ತಾರು ವರ್ಷ ತಡವಾಗಿ ಲಸಿಕೆ ಸಂಶೋಧಿಸಲಾಗಿತ್ತು. ಇಂದಿಗೂ ಏಡ್ಸ್‌ಗೆ ಲಸಿಕೆ ಇಲ್ಲ. ಆದರೆ, ಕರೊನಾ ಸೋಂಕಿಗೆ 10 ತಿಂಗಳಲ್ಲಿ ಲಸಿಕೆ ಸಿಕ್ಕಿದೆ. ಬಹಳ ದೇಶಗಳು ಲಸಿಕೆಗಾಗಿ ಸಂಶೋಧನೆ ಮುಂದುವರಿಸಿವೆ. ನಮ್ಮ ದೇಶದ ಲಸಿಕೆಗೆ ವಿದೇಶಗಳಲ್ಲೂ ಬೇಡಿಕೆ ಇದೆ. ಹೆಣ್ಣುಮಕ್ಕಳಿಗೆ ಶಿಕ್ಷಣ ನೀಡಿದ, ಅಸಮಾನತೆ ನಿವಾರಿಸಲು ಕೆಲಸ ಮಾಡಿದ ಜ್ಯೋತಿಬಾ ಪುಲೆ ಹಾಗೂ ಡಾ.ಅಂಬೇಡ್ಕರ್ ಜನ್ಮದಿನ ಪ್ರಯುಕ್ತ ಲಸಿಕೋತ್ಸವ ಮಾಡಲಾಗುತ್ತಿದೆ ಎಂದರು. ಆರೋಗ್ಯ ಇಲಾಖೆ ನಿರ್ದೇಶಕ ಡಾ.ಓಂಪ್ರಕಾಶ್ ಪಾಟೀಲ್, ಬೌರಿಂಗ್ ವೈದ್ಯಕೀಯ ಕಾಲೇಜು ನಿರ್ದೇಶಕ ಡಾ.ಮನೋಜ್ ಕುಮಾರ್ ಉಪಸ್ಥಿತರಿದ್ದರು.



ಬೌರಿಂಗ್ ಆಸ್ಪತ್ರೆಯಲ್ಲಿ ಲಸಿಕೆ ಉತ್ಸವಕ್ಕೆ ಆರೋಗ್ಯ ಸಚಿವ ಡಾ.ಕೆ.ಸುಧಾಕರ್ ಚಾಲನೆ ನೀಡಿದರು. ಎನ್‌ಎಚ್‌ಎಂ ನಿರ್ದೇಶಕಿ ಡಾ.ಅರುಂಧತಿ ಇತರರಿದ್ದರು.




## ವೈದ್ಯಾಧಿಕಾರಿ ಸಸ್ಪೆಂಡ್

ಬೆಂಗಳೂರು: ಕೊಡಿಗೇಹಳ್ಳಿ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ನಡೆದ ಕೋವಿಡ್ ಪರೀಕ್ಷೆಯ ಗಂಟಲು ದ್ರವ ಪರೀಕ್ಷೆ ಕಿಟ್ ದುರುಪಯೋಗ ಪ್ರಕರಣಕ್ಕೆ ಸಂಬಂಧಿಸಿದಂತೆ ಆಸ್ಪತ್ರೆ ವೈದ್ಯಾಧಿಕಾರಿ ಡಾ. ಪ್ರೇಮಾನಂದ್ ರನ್ನು ಅಮಾನತು ಮಾಡಲಾಗಿದೆ.

» ಕೋವಿಡ್ ಪರೀಕ್ಷೆ ಕಿಟ್ ನಾಶಪಡಿಸಿದ ಪ್ರಕರಣ

ಕೋವಿಡ್ ಪರೀಕ್ಷಾ ಕಿಟ್ ದುರುಪಯೋಗದ ವಿಡಿಯೋ ಜಾಲತಾಣದಲ್ಲಿ ಹರಿದಾಡಿದ್ದ ಬಗ್ಗೆ ಏ.8ರಂದು ಡಾ. ಪ್ರೇಮಾನಂದ್‌ಗೆ ಬಿಬಿಎಂಪಿ ಆರೋಗ್ಯ ವಿಭಾಗದಿಂದ ಕಾರಣ ಕೇಳಿ ನೋಟಿಸ್ ನೀಡಲಾಗಿತ್ತು. ಲಿಖಿತ ಸಮಜಾಯಿಷಿ ನೀಡಿ 'ಕೋವಿಡ್ ಮೇಲ್ವಿಚಾರಣೆಗೆ ಬೇರೆಡೆ ಹೋದಾಗ ಈ ಘಟನೆ ನಡೆದಿರಬಹುದು' ಎಂದಿದ್ದಾರೆ. ಆದರೆ, ಹೇಳಿಕೆಯು ಸಮಂಜಸವಾಗಿಲ್ಲ ಮತ್ತು ಆರೋಗ್ಯ ಕೇಂದ್ರದಲ್ಲಿ ಸರಿಯಾದ ಮೇಲ್ವಿಚಾರಣೆ ನಡೆಸಿಲ್ಲ. ಹೀಗಾಗಿ, ಕರ್ತವ್ಯಲೋಪ ಎಸಗಿರುವುದು ಕಂಡುಬಂದಿರುವ ಹಿನ್ನೆಲೆಯಲ್ಲಿ ವೈದ್ಯಾಧಿಕಾರಿಯನ್ನು ಅಮಾನತು ಮಾಡಲಾಗಿದೆ.

## ಹೊಸ ಪ್ರಕರಣ 7,584 [illegible]

ಬೆಂಗಳೂರು: ರಾಜಧಾನಿಯಲ್ಲಿ ಭಾನುವಾರ 7,584 ಹೊಸ ಕೋವಿಡ್ ಪ್ರಕರಣಗಳು (ರಾಜ್ಯದಲ್ಲಿ ಶೇ.78) ದೃಢಪಟ್ಟಿವೆ. ಹಬ್ಬದ ಸಂದರ್ಭದಲ್ಲಿ ಸಕ್ರಿಯ ಪ್ರಕರಣ ಸಂಖ್ಯೆ 51 ಸಾವಿರಕ್ಕೆ ಏರಿಕೆಯಾಗಿರುವುದು ಆತಂಕಕ್ಕೆ ಕಾರಣವಾಗಿದೆ. ಕಳೆದ ಸೆಪ್ಟೆಂಬರ್‌ನಲ್ಲಿ 24 ಗಂಟೆಗಳಲ್ಲಿ 7 ಸಾವಿರಕ್ಕೂ ಅಧಿಕ ಕೋವಿಡ್ ಸೋಂಕಿತರು ಪತ್ತೆಯಾಗಿದ್ದರು. ಈಗ ಕೋವಿಡ್ 2ನೇ ಅಲೆ ತೀವ್ರತೆ ಹೆಚ್ಚಾಗಿದ್ದು, ಭಾನುವಾರವೂ 7 ಸಾವಿರ ಗಡಿ ದಾಟಿದೆ. ಕೇವಲ 1,184 ಮಂದಿ ಸೋಂಕಿನಿಂದ ಗುಣಮುಖರಾಗಿದ್ದು, 27 ಮಂದಿ ಸಾವನ್ನಪ್ಪಿದ್ದಾರೆ. ಈ ಮೂಲಕ ಒಟ್ಟು ಸೋಂಕಿತರ ಸಂಖ್ಯೆ 4,81,982ಕ್ಕೆ ಏರಿಕೆಯಾಗಿದೆ. ಈವರೆಗೆ 4,25,930 ಮಂದಿ ಸೋಂಕು ಮುಕ್ತರಾಗಿದ್ದಾರೆ.

ಕಳೆದ 15 ದಿನಗಳಿಂದ ನಗರದಲ್ಲಿ 53,809 ಮಂದಿ ಹೊಸ ಕರೊನಾ ಸೋಂಕಿತರ ಸಂಖ್ಯೆ ಪತ್ತೆಯಾಗಿದ್ದು, ಕೇವಲ 18,221 ಮಂದಿ ಮಾತ್ರ ಗುಣಮುಖರಾಗಿದ್ದಾರೆ. ಪ್ರತಿನಿತ್ಯ ಗುಣಮುಖರ ಸಂಖ್ಯೆಗಿಂತ ಶೇ.70 ಅಧಿಕ ಹೊಸ ಪ್ರಕರಣ ಪತ್ತೆಯಾಗುತ್ತಿದ್ದರಿಂದ ಸಕ್ರಿಯ ಸೋಂಕಿತರ ಸಂಖ್ಯೆ 51,236ಕ್ಕೆ ಏರಿಕೆಯಾಗಿದೆ. ಒಟ್ಟು ಸಕ್ರಿಯ ಸೋಂಕಿತರ ಪೈಕಿ ಶೇ.83 ಸೋಂಕಿತರು ಹೋಂ ಐಸೋಲೇಷನ್‌ಗೆ ಒಳಗಾಗಿದ್ದಾರೆ. ಉಳಿದ ಶೇ.17 ಮಾತ್ರ ಕರೊನಾ ನಿಗದಿತ ಆಸ್ಪತ್ರೆ, ಕೋವಿಡ್ ಆರೈಕೆ ಕೇಂದ್ರದಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಹಬ್ಬದ ಸಂದರ್ಭದಲ್ಲಿ ಪಾಲಿಕೆ ಸಿಬ್ಬಂದಿ ರಜೆಯಲ್ಲಿದ್ದಾಗ ಸೋಂಕಿತರು ಹೊರಗೆ ಬಂದರೆ, ಮತ್ತಷ್ಟು ಸೋಂಕು ಹರಡುವ ಸಾಧ್ಯತೆಯಿದೆ.

## ಒಬ್ಬನಿಂದ 16 ಮಂದಿಗೆ

ಕೋವಿಡ್ 2ನೇ ಅಲೆಯಲ್ಲಿ ಒಬ್ಬ ವ್ಯಕ್ತಿಯಿಂದ ಸರಾಸರಿ 16 ಜನರಿಗೆ ಸೋಂಕು ಹರಡಲಿದೆ ಎಂದು ಕೋವಿಡ್ ತಾಂತ್ರಿಕ ಸಲಹಾ ಸಮಿತಿ ತಜ್ಞರು ತಿಳಿಸಿದ್ದಾರೆ. ಆದರೂ, ಜನರ ಸಂಚಾರ ಮಾತ್ರ ಕಡಿಮೆಯಾಗಿಲ್ಲ. ನಗರದಿಂದ ಗ್ರಾಮೀಣ ಭಾಗಕ್ಕೆ ಹೋಗುವವರು ಮತ್ತು ಹೊರಗಿನಿಂದ ಬರುವವರ ಸಂಖ್ಯೆ ಅಧಿಕವಾಗಿದೆ.